ಅಗ್ನಿಶಾಮಕ ಸೇವೆಗಳ ಇಲಾಖೆಯಲ್ಲಿ ಪರಿಶಿಷ್ಟ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ.

1842 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಕಾರಾಗೃಹ, ಪೌರರಕ್ಷಣೆ, ಸೈನಿಕ ಕಲ್ಯಾಣ ಮತ್ತು ಅಗ್ನಿಶಾಮಕ ಸೇವೆಗಳ ರಾಜ್ಯ ಸಚಿವರು ಈ ಕೆಳಕಂಡ ಪಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯ ಅಗ್ನಿಶಾಮಕ ಸೇವೆಗಳ ಇಲಾಖೆಯಲ್ಲಿ ಪರಿಶಿಷ್ಟ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಅನುಕಂಪದ ಆಧಾರದಲ್ಲಿ ನೇಮಕಾತಿ ಮಾಡುವ ಬಗ್ಗೆ ವಿಳಂಬ ಉಂಟಾಗಿರುವುದು ನಿಜವಲ್ಲವೇ?*

ಆ) *ಈ ಹಿಂದೆ ಅಗ್ನಿಶಾಮಕ ಸೇವೆಗಳ ಇಲಾಖೆಯು ಅನುಕಂಪದ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಈ ಅಭ್ಯರ್ಥಿಗಳ ಅರ್ಜಿಗಳನ್ನು ವಿಭಾಗಾಧಿಕಾರಿ, ಮೈಸೂರು ಜಿಲ್ಲೆ ಇವರಿಗೆ ಕಳುಹಿಸಿರುವುದು ನಿಜವಲ್ಲವೇ?*

ಇ) *ಹಾಗಿದ್ದಲ್ಲಿ ಈ ಕೂಡಲೇ ಬಾಕಿ ಉಳಿದಿರುವ ಎಲ್ಲಾ ಅನುಕಂಪದ ನೇಮಕಾತಿ ನಿರೀಕ್ಷಿಸುವ ಅಭ್ಯರ್ಥಿಗಳಿಗೆ ನೇಮಕಾತಿ ನೀಡುವಲ್ಲಿ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ? (ವಿವರ ನೀಡುವುದು).*

ಶ್ರೀ ವಿ. ಸೋಮಣ್ಣ (ಕಾರಾಗೃಹ, ಗೃಹ ರಕ್ಷಕದಳ, ಬಂಧೀಖಾನೆ ಮತ್ತು ಅಗ್ನಿಶಾಮಕ ಸೇವೆಗಳ ರಾಜ್ಯ ಸಚಿವರು) :

ಅ) ಕರ್ನಾಟಕ ಅಗ್ನಿಶಾಮಕ ಸೇವೆಗಳ ಇಲಾಖೆಯಲ್ಲಿ ಪರಿಶಿಷ್ಟ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುವ ಬಗ್ಗೆ ವಿಳಂಬವಾಗಿರುವುದು ಕಂಡು ಬಂದಿರುವುದಿಲ್ಲ.

ಆ) ಹೌದು.

ಇ) ಕರ್ನಾಟಕ ಅಗ್ನಿಶಾಮಕ ಸೇವೆಗಳ ಇಲಾಖೆಯಲ್ಲಿ 21 ಪ್ರಕರಣಗಳು ಬಾಕಿ ಇದ್ದು ಈ ಕೆಳಗೆ ನೀಡಿರುವ ವಿವರಣೆಯಂತೆ ಕ್ರಮಕೈಗೊಳ್ಳಲಾಗಿದೆ.

ಬಾಕಿ 21 ಪ್ರಕರಣಗಳ ವಿವರಗಳು

ಅರ್ಜಿದಾರರ ಹೆಸರು	ಬಾಕಿ ಉಳಿದಿರುವುದಕ್ಕೆ ಕಾರಣಗಳು
1) ಕೆ. ಕ್ರಿಷ್ಟಫರ್	ಅರ್ಜಿದಾರರು ದಾಖಲಾತಿಗಳನ್ನು ಇನ್ನು ಒದಗಿಸಿರುವುದಿಲ್ಲ. ದಿನಾಂಕ 15-4-1998 ರಂದು ನೆನಪೋಲೆಯನ್ನು ಕೊಡಲಾಗಿದೆ.